ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಸ್ವಚ್ಛ ಭಾರತ
ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ






## ಉತ್ತರಕನ್ನಡ ಜಿಲ್ಲೆಯನ್ನು ಕಸಮುಕ್ತವಾಗಿಸಲು ನಾರಿಶಕ್ತಿ ಪಣ;

# ಸ್ವಚ್ಛತಾ ಕಾರ್ಯದಲ್ಲಿ ಮಹಿಳಾ ಕಾರ್ಮಿಕರೇ ಮುಂದು










ಗ್ರಾಮಗಳನ್ನು ತ್ಯಾಜ್ಯಮುಕ್ತವಾಗಿಸುವ ಗುರಿಯೊಂದಿಗೆ ಪ್ರಾರಂಭವಾದ ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯು ಇಂದು ಮಹಿಳೆಯರ ಸ್ವಾವಲಂಬಿ ಜೀವನಕ್ಕೆ ಬೆನ್ನೆಲುಬಾಗಿ ನಿಂತಿದೆ. ಅಡುಗೆ, ಕೃಷಿ ಕಾರ್ಯಗಳನ್ನಷ್ಟೇ ನಿಭಾಯಿಸುತ್ತಿದ್ದ ಗ್ರಾಮೀಣ ಮಹಿಳೆಯರು ನೈರ್ಮಲ್ಯಕ್ಕೆ ಸಂಬಂಧಿಸಿದ ವಿವಿಧ ಉದ್ಯೋಗಗಳಲ್ಲಿ ತೊಡಗಿಸಿಕೊಂಡು ಆರಾಮದಾಯಕ ಬದುಕು ಕಂಡುಕೊಂಡಿದ್ದಾರೆ.

***ಉತ್ತರಕನ್ನಡ ಜಿಲ್ಲೆಯಲ್ಲಿಯೂ ಸ್ವಚ್ಛ ವಾಹಿನಿ ಚಾಲನೆ, ಕಸ ಸಂಗ್ರಹಣೆ, ವಿಂಗಡಣೆ ಕಾರ್ಯದಲ್ಲಿ ಮಹಿಳಾ ಕಾರ್ಮಿಕರೇ ಮುಂದಿದ್ದು ಮಾದರಿಯಾಗಿದ್ದಾರೆ.***

ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ ಮಿಷನ್ (ಗ್ರಾ) ಯೋಜನೆಯಡಿ ಘನ ತ್ಯಾಜ್ಯಗಳನ್ನು ಸಂಗ್ರಹಿಸುವ ಕೆಲಸದಲ್ಲಿ ನಿರತರಾದವರಲ್ಲಿ ಬಹುಪಾಲು ಮಹಿಳೆಯರೇ ಇದ್ದಾರೆ. ಮನೆ ಮನೆಯಿಂದ ಕಸ ಸಂಗ್ರಹಿಸಿ ತಂದು ವಾಹನಕ್ಕೆ ತುಂಬುವುದರಿಂದ ಹಿಡಿದು, ಸ್ವಚ್ಛತಾ ಸಂಕೀರ್ಣಕ್ಕೆ ತಲುಪಿಸುವುದರಲ್ಲಿಯೂ ಮಹಿಳಾ ಕಾರ್ಮಿಕರೇ ಮುಂಚೂಣಿಯಲ್ಲಿದ್ದಾರೆ.

ಗ್ರಾಮೀಣ ಪ್ರದೇಶದಲ್ಲಿ ವಾರದಲ್ಲಿ ಮೂರು ದಿನ ಅಥವಾ ವಾರಕ್ಕೊಮ್ಮೆ ಮನೆ ಮನೆಯಿಂದ ತ್ಯಾಜ್ಯ ಸಂಗ್ರಹಿಸಲಾಗುತ್ತದೆ. ಸ್ವಚ್ಛತಾ ಸಂಕೀರ್ಣದಲ್ಲಿ ಪ್ಲಾಸ್ಟಿಕ್, ರಟ್ಟು, ಕಾಗದ, ಗಾಜಿನ ಬಾಟಲಿಗಳು ಹೀಗೆ ಬೇರೆ ಬೇರೆ ವಿಭಾಗದಲ್ಲಿ ತ್ಯಾಜ್ಯವನ್ನು ಪ್ರತ್ಯೇಕಿಸಿ ವ್ಯವಸ್ಥಿತವಾಗಿ ದಾಸ್ತಾನು ಮಾಡುವ ಕೆಲಸವನ್ನು ಸ್ವಸಹಾಯ ಗುಂಪುಗಳ ಸದಸ್ಯರೇ ನಿರ್ವಹಿಸುತ್ತಿದ್ದಾರೆ.

**ಉತ್ತರ ಕನ್ನಡ ಜಿಲ್ಲೆಯ 229 ಗ್ರಾಮ ಪಂಚಾಯಿತಿಗಳ ಪೈಕಿ 185 ಕಡೆಗಳಲ್ಲಿ ಸ್ವಚ್ಛತಾ ಸಂಕೀರ್ಣದಲ್ಲಿ ಕಸ ವಿಂಗಡಿಸುವ ಕಾರ್ಯವನ್ನು ಮಹಿಳೆಯರೇ ನಿರ್ವಹಿಸುತ್ತಿದ್ದಾರೆ. ಗೋಕರ್ಣ, ಚಿತ್ತಾಕುಲ ಗ್ರಾಮ ಪಂಚಾಯಿತಿಯಲ್ಲಿ ವ್ಯಾಪಕ ಪ್ರಮಾಣದ ಕಸ ಸಂಗ್ರಹವಾಗುತ್ತಿದ್ದು, ಅವುಗಳನ್ನು ಕೇವಲ ಮಹಿಳೆಯರೇ ನಿಭಾಯಿಸಿಕೊಂಡು ಹೋಗುತ್ತಿರುವುದು ವಿಶೇಷ.**

## ಸ್ವಚ್ಛ ವಾಹಿನಿಯ ಸಾರಥಿಯಾಗಿರುವ 104 ಮಹಿಳೆಯರು!




"ಸಾರ್ವಜನಿಕ ಸ್ಥಳದಲ್ಲಿ ಎಲ್ಲೆಂದರಲ್ಲಿ ಕಸ ಎಸೆದು ಹೋಗುವವರು ನಿಜವಾಗಿಯೂ ನಾಚಿಕೆ ಪಡಬೇಕು. ಮನೆ ಮನೆಯಿಂದ ತಂದ ಕಸಗಳನ್ನು ವಿಲೇವಾರಿ ಘಟಕದೊಳಗೆ ಪ್ರತ್ಯೇಕಿಸಿ, ಅವುಗಳನ್ನು ವ್ಯವಸ್ಥಿತವಾಗಿ ವಿಲೇವಾರಿ ಮಾಡುವ ನಮಗೇಕೆ ಮುಜುಗರ? ಗ್ರಾಮವನ್ನು ಶುಚಿಯಾಗಿಸುವ ಪುಣ್ಯದ ಕೆಲಸದಲ್ಲಿ ತೊಡಗಿಕೊಂಡಿರುವ ಬಗ್ಗೆ ನಮಗೆ ಹೆಮ್ಮೆಯಿದೆ ಎನ್ನುತ್ತಾರೆ ಇಲ್ಲಿನ ಮಹಿಳಾ ಕಾರ್ಮಿಕರು.

ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮನೆ ಮನೆಯಿಂದ ಕಸ ಸಂಗ್ರಹಣೆಗಾಗಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಸ್ವಚ್ಛತಾ ವಾಹಿನಿಯನ್ನು ನೀಡಲಾಗಿದೆ. ಈ ವಾಹನಗಳನ್ನು ಚಲಾಯಿಸುವವರ ಪೈಕಿ ಬಹುತೇಕ ಮಹಿಳಾ ಚಾಲಕಿಯರೇ ಇದ್ದಾರೆ. ಉತ್ತರಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ 104 ಮಹಿಳೆಯರು ಸ್ವಚ್ಛತಾ ವಾಹಿನಿ ಚಾಲಕಿಯರಾಗಿ ಕಾರ್ಯನಿರ್ವಹಿಸುತ್ತಿರುವುದು ವಿಶೇಷ. ಇವರಿಗೆ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಸಂಜೀವಿನಿ (ಎನ್‌ಆರ್‌ಎಲ್‌ಎಂ) ವಿಭಾಗದಿಂದ ತಿಂಗಳ ಕಾಲ ಚಾಲನಾ ತರಬೇತಿ ನೀಡಿ, ಚಾಲನಾ ಪರವಾನಗಿ ನೀಡಿ ನೇಮಕ ಮಾಡಿಕೊಳ್ಳಲಾಗಿದೆ